ಕನ್ನಡಪ್ರಭ

**Saturday, October 29, 2011**

# ನಿಷ್ಠೆ, ಶ್ರದ್ಧೆಯಿಂದ ಕೆಲಸ ಮಾಡಿ

## ಜೈನ್ ವಿವಿ ಪದವಿ ಪ್ರದಾನ ಸಮಾರಂಭದಲ್ಲಿ ನ್ಯಾ.ವೆಂಕಟಾಚಲಯ್ಯ ಕರೆ




**ಬೆಂಗಳೂರು:** ನಿಮ್ಮ ಎಲ್ಲಾ ಚಟುವಟಿಕೆಗಳಲ್ಲಿ ಕ್ರಿಯಾಶೀಲತೆಯನ್ನು ರೂಢಿಸಿಕೊಳ್ಳಬೇಕು. ನಿಮ್ಮ ಕಣ್ಣಿನಲ್ಲಿ ಸದಾ ಕಾಂತಿ ತುಂಬಿರಲಿ. ಪ್ರತಿಯೊಂದು ಕೆಲಸ ಕಾರ್ಯಗಳನ್ನು ನಿಷ್ಠೆ, ಶ್ರದ್ಧಾ ಭಕ್ತಿಯಿಂದ ಮಾಡಿ ಎಂದು ನಿವೃತ್ತ ನ್ಯಾ. ಎಂ.ಎನ್. ವೆಂಕಟಾಚಲಯ್ಯ ವಿದ್ಯಾರ್ಥಿಗಳಿಗೆ ಕರೆ ನೀಡಿದರು. ಜೈನ್ ವಿಶ್ವವಿದ್ಯಾಲಯದಲ್ಲಿ ಏರ್ಪಡಿಸಿದ್ದ ಪದವಿ ಪ್ರದಾನ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು.

ಸ್ಪರ್ಧಾತ್ಮಕ ಯುಗದಲ್ಲಿ ಅವಕಾಶಗಳು ಕಡಿಮೆಯಾಗಿದ್ದು, ಪದವೀಧರರು ಸಿಕ್ಕ ಅವಕಾಶಗಳನ್ನು ಬಳಸಿಕೊಂಡು ಜೀವನ ಶೈಲಿಯಲ್ಲಿ ರೂಪಿಸಿಕೊಳ್ಳಿ ಎಂದು ಹಾರೈಸಿದರು.

ಜೈನ್ ವಿಶ್ವವಿದ್ಯಾಲಯದಲ್ಲಿ ವಾಣಿಜ್ಯ, ಅರ್ಥಶಾಸ್ತ್ರ, ಸಮೂಹ ಸಂವಹನ, ಇಂಗ್ಲೀಷ್, ಕನ್ನಡ ಸೇರಿದಂತೆ ವಿವಿಧ ವಿಷಯಗಳಲ್ಲಿ ಉತ್ತೀರ್ಣರಾದ 378 ಸ್ನಾತಕೋತ್ತರದ ಪದವೀಧರರಿಗೆ ಪದವಿ ಪ್ರದಾನ ಮತ್ತು ಹೆಚ್ಚಿನ ಅಂಕಗಳಿಸಿದ ವಿದ್ಯಾರ್ಥಿಗಳಿಗೆ ಚಿನ್ನದ ಪದಕ ನೀಡಿ ಗೌರವಿಸಲಾಯಿತು.

ವಿವಿಯ ಅಧ್ಯಕ್ಷ ಡಾ.ಆರ್. ಚೆನ್‌ರಾಜ್ ಜೈನ್, ಕುಲಪತಿ ಡಾ.ಎನ್. ಸುಂದರ ರಾಜನ್, ಡಾ.ಸಿ.ಜಿ. ಕೃಷ್ಣದಾಸ್ ನಾಯರ್ ಮತ್ತಿತರರು ಹಾಜರಿದ್ದರು.